**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೆಗ್ಗಡದೇವನಕೋಟೆ, ಮೈಸೂರು ಜಿಲ್ಲೆ.**

## <u>ಸಿ.ಸಿ.ನಂ. 350/2023</u>

| | | |
|---|---|---|
| ಸಾಕ್ಷಿದಾರರ ಹೆಸರು | : | ಟಿ. ರಾಮೇಗೌಡ |
| ತಂದೆಯ ಹೆಸರು | : | ತಿಮ್ಮೇಗೌಡ |
| ವಯಸ್ಸು | : | 55 ವರ್ಷ |
| ಉದ್ಯೋಗ | : | ಪೋಲೀಸ್ ಸಹಾಯಕ ಉಪ ನಿರೀಕ್ಷಕರು, ಬಿಳಿಕೆರೆ ಪೋಲೀಸ್ ಠಾಣೆ. |
| ವಾಸಸ್ಥಳ | : | ಬಿಳಿಕೆರೆ, ಹುಣಸೂರು ತಾ. |

**<u>ಸಾಕ್ಷಿಯನ್ನು ದಿನಾಂಕಃ 06.01.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ಎ.ಪಿ.ಪಿ. ರವರಿಂದಃ</u>**

ನಾನು ದಿನಾಂಕಃ 10.11.2017 ರಿಂದ ದಿನಾಂಕಃ 20.06.2023 ರವರೆಗೆ ಹೆಚ್.ಡಿ. ಕೋಟೆ ಪೋಲೀಸ್ ಠಾಣೆಯಲ್ಲಿ ಪೋಲೀಸ್ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ 04.05.2023 ರಂದು ನಾನು ಠಾಣಾ ಪ್ರಭಾರ ಕರ್ತವ್ಯದಲ್ಲಿದ್ದಾಗ ಮಧ್ಯಾಹ್ನ 02.30 ಗಂಟೆಗೆ ಚಾಸಾ-1 ರವರು ಲಿಖಿತ ದೂರಿನ ಮೇರೆಗೆ ಠಾಣೆಗೆ ಬಂದಿದ್ದು, ಅವರಿಂದ ದೂರನ್ನು ಸ್ವೀಕರಿಸಿ ನಮ್ಮ ಠಾಣಾ ಮೊಕದ್ದಮೆ ಸಂಖ್ಯೆ: 147/2023 ಎಂದು ಪ್ರಕರಣ ದಾಖಲು ಮಾಡಿಕೊಂಡಿರುತ್ತೇನೆ. ಪಿರ್ಯಾದನ್ನು ಈಗಾಗಲೇ ನಿ.ಪಿ.-1 ಎಂದು ಗುರುತಿಸಲಾಗಿದ್ದು, ಪಿರ್ಯಾದಿನಲ್ಲಿರುವ ಸಾಕ್ಷಿಯ

ಸಹಿಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು, ಅದನ್ನು **ನಿ.ಪಿ.–1(ಬಿ)** ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು **ನಿ.ಪಿ.–3**, ಸಾಕ್ಷಿಯ ಸಹಿ ಯನ್ನು **ನಿ.ಪಿ.–3(ಎ)** ಎಂದು ಗುರುತಿಸಲಾಯಿತು. ದಿನಾಂಕಃ 05.05.2023 ರಂದು ಕೃತ್ಯ ನಡೆದ ಸ್ಥಳವಾದ ಹೆಚ್.ಡಿ. ಕೋಟೆ ಕಸಬಾ ಹೋಬಳಿಗೆ ಸೇರಿದ ಸ.ನಂ. 166 ರ ಜಮೀನಿಗೆ ಭೇಟಿ ನೀಡಿ ಚಾಸಾ–2 ಮತ್ತು ಚಾಸಾ–3 ರವರ ಸಮಕ್ಷಮ ಸ್ಥಳ ಮಹಜರ್ ಕ್ರಮ ಜರುಗಿಸಿರುತ್ತೇನೆ. ಸ್ಥಳ ಮಹಜರ್ ಅನ್ನು ಈಗಾಗಲೇ ನಿ.ಪಿ.–2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು **ನಿ.ಪಿ.–2(ಸಿ)** ಎಂದು ಗುರುತಿಸಲಾಯಿತು. ನಾನು ಅದೇ ದಿವಸ ಚಾಸಾ–4 ಮತ್ತು ಚಾಸಾ–5 ರವರ ಹೇಳಿಕೆಗಳನ್ನು ಪಡೆದಿರುತ್ತೇನೆ. ಆರೋಪಿಯ ವಿರುದ್ಧ ಸಾಕ್ಷ್ಯಾಧಾರಗಳು ಕಂಡು ಬಂದಿದ್ದರಿಂದ ಆರೋಪಿಯ ವಿರುದ್ಧ ದೋಷಾರೋಪಣ ಪಟ್ಟಿ ಸಲ್ಲಿಸಿರುತ್ತೇನೆ. ಆರೋಪಿಯನ್ನು ನೋಡಿ ಸಾಕ್ಷಿಯು ಗುರುತಿಸಿರುತ್ತಾರೆ. ಆರೋಪಿ ಈ ದಿನ ನ್ಯಾಯಾಲಯದಲ್ಲಿ ಹಾಜರಿರುತ್ತಾರೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ. ಎನ್.ಆರ್.ಎನ್. ವಕೀಲರಿಂದಃ** ಆರೋಪಿ ಪರ ವಕೀಲರು ನ್ಯಾಯಾಲಯಕ್ಕೆ ಗೈರು ಹಾಜರಿದ್ದು, ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರು ವಿಚಾರಣೆಃ ಇಲ್ಲ.**

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**

**ಹೆಗ್ಗಡದೇವನಕೋಟೆ.**